# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ

## ಉತ್ತರ ಕನ್ನಡ : ಕಾರವಾರ

**ಎಸ್.ಸಿ. ನಂ.10/2019**

**ದೋ.ಸಾ. : 67 ಫ್ರಾ.ಸಾ. : 37**

| | | |
|---|---|---|
| ಸಾಕ್ಷಿಯ ಹೆಸರು | : | ದರ್ಶನ್ ಅನಂತ್ ಪವಾರ್ |
| ತಂದೆಯ ಹೆಸರು | : | ಅನಂತ್ ಪವಾರ್ |
| ವಯಸ್ಸು | : | 45 ವರ್ಷ |
| ಕೆಲಸ | : | ಸಿ.ಹೆಚ್.ಸಿ–1012, ಕರಾವಳಿ ಕಾವಲು ಪಡೆ ಠಾಣೆ, ಕಾರವಾರ |
| ವಾಸ | : | ಕಾರವಾರ |

**ದಿನಾಂಕಃ 03–09–2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದ:–**

1. ನಾನು 2017 ರಿಂದ 2021 ರವರೆಗೆ ಕಾರವಾರ ನಗರ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿ.21–10–2018 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ರಾತ್ರಿ 23.00 ಗಂಟೆಗೆ ಚಾಸಾ–1 ರವರು ಠಾಣೆಗೆ ಹಾಜರಾಗಿ, ಗಣಕೀಕೃತ ದೂರನ್ನು ನೀಡಿದ್ದು, ಅದನ್ನು ಸ್ವೀಕರಿಸಿಕೊಂಡು ಠಾಣಾ ಗುನ್ನಾ ಸಂಖ್ಯೆ 141/2018 ರಲ್ಲಿ ಪ್ರಕರಣ ದಾಖಲಿಸಿ, ಪ್ರಥಮ ವರ್ತಮಾನ ವರದಿಯನ್ನು ಪೊಲೀಸ್ ಐಟಿಯಲ್ಲಿ ದಾಖಲಿಸಿದಾಗ ಸರ್ವರ್ ನಲ್ಲಿ ತಾಂತ್ರಿಕ ದೋಷ ಕಂಡುಬಂದಿದ್ದು, ರಾತ್ರಿ 1.00 ಗಂಟೆಗೆ ಪ್ರಥಮ ವರ್ತಮಾನ ವರದಿಯನ್ನು ಪ್ರಿಂಟ್ ತೆಗೆದು ನಂತರ ಪ್ರಥಮ ವರ್ತಮಾನ ವರದಿ ಹಾಗೂ ದೂರನ್ನು ನಮ್ಮ ಸಿಬ್ಬಂದಿಯಾದ ಚಾಸಾ–48 ರವರ ಮೂಲಕ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಯು ತಾನು ಸ್ವೀಕರಿಸಿದ ಗಣಕೀಕೃತ ದೂರನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–100 ಎಂದು, ಸಾಕ್ಷಿಯ ಸಹಿಯನ್ನು ನಿಪಿ–100(ಎ) ಎಂದು ಗುರುತಿಸಲಾಯಿತು. ಅದೇ ರೀತಿ, ಸಾಕ್ಷಿಯು ತಾನು ದಾಖಲಿಸಿದ ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–101 ಎಂದು, ಸಾಕ್ಷಿಯ ಸಹಿಯನ್ನು ನಿಪಿ–101(ಎ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು

ನ್ಯಾಯಾಲಯಕ್ಕೆ ಕಳುಹಿಸಿದ ದಿನಾಂಕ 21-10-2018 ಆಗುವ ಬದಲು, ಗಣಕೀಕೃತ ದೋಷದಿಂದಾಗಿ ದಿ.22-10-2018 ಎಂದು ಆಗಿರುತ್ತದೆ. ಆನಂತರ ಪ್ರಕರಣದ ಕಡತವನ್ನು ಚಾಸಾ-68 ಪಿ.ಎಸ್.ಐ. ನವೀನ್ ನಾಯ್ಕ ರವರಿಗೆ ನೀಡಿರುತ್ತೇನೆ.

**<u>ಪಾಟೀ ಸವಾಲುಃ 2 ಮತ್ತು 3 ನೇ ಆರೋಪಿ ಪರ ಶ್ರೀ ಎಲ್.ಎಸ್.ಕೆ. ವಕೀಲರಿಂದಃ-</u>**

2. ನಿಪಿ-100 ಪಿರ್ಯಾದಿಯನ್ನು ನಮ್ಮ ಠಾಣೆಯಲ್ಲಿ ಗಣಕೀಕರಣ ಮಾಡಿಲ್ಲ. ಚಾಸಾ-1 ರವರು ರಾತ್ರಿ 11.00 ಗಂಟೆಗೆ ಠಾಣೆಗೆ ಹಾಜರಾಗಿದ್ದು, ಆ ಕೂಡಲೇ ಪ್ರಕರಣ ದಾಖಲಿಸಿರುತ್ತೇನೆ. ನಿಪಿ-101 ಪ್ರಥಮ ವರ್ತಮಾನ ವರದಿಯ ಮೇಲೆ ಪಿರ್ಯಾದಿಯ ಸಹಿಯನ್ನು ಪಡೆದಿರುತ್ತೇನೆ. ದೂರು ನೀಡಿದ ನಂತರ ಚಾಸಾ-1 ರವರು ನಮ್ಮ ಠಾಣೆಯಲ್ಲಿ ಸುಮಾರು 45 ನಿಮಿಷಗಳ ಕಾಲ ಇದ್ದು, ನಂತರ ಅವರು ಪ್ರಥಮ ವರ್ತಮಾನ ವರದಿ ಪ್ರಿಂಟ್ ಮಾಡಲಾಗದ ಕಾರಣ, ಪುನಃ ಬೆಳಿಗ್ಗೆ ಬಂದು ಪ್ರತಿಯನ್ನು ಪಡೆದುಕೊಂಡು ಹೋಗಿರುತ್ತಾರೆ. ಸಂಪೂರ್ಣ ಮಾಹಿತಿಯನ್ನು ಪರಿಶೀಲಿಸಿದ ನಂತರವೇ ಪೊಲೀಸ್ ಐ.ಟಿ.ಯಲ್ಲಿ ದಾಖಲು ಮಾಡಿರುತ್ತೇವೆ ಎಂದರೆ ಸರಿ. ನಾವು ಪ್ರಥಮ ವರ್ತಮಾನ ವರದಿಯನ್ನು ದಾಖಲು ಮಾಡುವಾಗ ಯಾವುದೇ ತಪ್ಪುಗಳು ಕಂಡುಬಂದಿರುವುದಿಲ್ಲ. ನಾವು ಪರಿಶೀಲನೆ ಮಾಡಿದಾಗ ದಿನಾಂಕ ತಪ್ಪಾಗಿರುವುದು ನನ್ನ ಗಮನಕ್ಕೆ ಬಂದಿರುವುದಿಲ್ಲ. ನ್ಯಾಯಾಲಯಕ್ಕೆ ಪ್ರಥಮ ವರ್ತಮಾನ ವರದಿಯನ್ನು ಕಳುಹಿಸುವಾಗ, ಅದರಲ್ಲಿಯ ಕಲಂ ನಂ.13 ರಲ್ಲಿ ದಿನಾಂಕವನ್ನು ತಿದ್ದುಪಡಿ ಮಾಡಿಲ್ಲ. ನಿಪಿ-101 ಪ್ರಥಮ ವರ್ತಮಾನ ವರದಿಯ ಕಲಂ ನಂ.13 ರಲ್ಲಿ ದಿನಾಂಕವನ್ನು ಯಾರು ಮತ್ತು ಯಾವಾಗ ತಿದ್ದುಪಡಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಚಾಸಾ-48 ರವರು ಪ್ರಥಮ ವರ್ತಮಾನ ವರದಿ ಹಾಗೂ ದೂರನ್ನು ನ್ಯಾಯಾಲಯಕ್ಕೆ ಸಲ್ಲಿಸಿದ ಬಗ್ಗೆ ನನಗೆ ಯಾವುದೇ ವರದಿಯನ್ನು ನೀಡಿರುವುದಿಲ್ಲ. ನಾನು ದಿ.21-10-2018 ರಂದು ಯಾವುದೇ ಪ್ರಕರಣ ದಾಖಲಿಸಿಲ್ಲ ಹಾಗೂ ಪ್ರಥಮ ವರ್ತಮಾನ ವರದಿ ಹಾಗೂ ದೂರನ್ನು ಚಾಸಾ-48 ರವರಿಗೆ ನೀಡಿಲ್ಲ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎ.ಎ.ಎ. ವಕೀಲರಿಂದಃ-</u>**

2 ಮತ್ತು 3 ನೇ ಆರೋಪಿತರ ಪರ ವಕೀಲರು ಮಾಡಿದ ಪಾಟೀ ಸವಾಲನ್ನು ಅಳವಡಿಸಿಕೊಂಡಿರುತ್ತಾರೆ.

**<u>ಪಾಟೀ ಸವಾಲುಃ 4 ನೇ ಆರೋಪಿ ಪರ ಶ್ರೀ ಎನ್.ವಿ.ಎನ್. ವಕೀಲರಿಂದಃ–</u>**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**<u>ಪಾಟೀ ಸವಾಲುಃ 5 ನೇ ಆರೋಪಿ ಶ್ರೀ ಹೆಚ್ ಎಸ್ ಎಸ್ ವಕೀಲರಿಂದಃ–</u>**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

Sd/-

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ